ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ಗುರುತಿನ ಪ್ರಶ್ನೆ

ದಿನಾಂಕ : 29-03-2021 ಪ್ರಶ್ನೆ ಸಂಖ್ಯೆ : 327 (2342)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 29-03-2021

ಉತ್ತರಿಸುವ ಸಚಿವರು : ಅರಣ್ಯ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

ವಿಷಯ : ಕಾಡು ಪ್ರಾಣಿಗಳಿಂದ ಆಗುತ್ತಿರುವ ಬೆಳೆ ನಷ್ಟಗಳ ಬಗ್ಗೆ

(ಅ) ಅರಣ್ಯದಂಚಿನ ಹೊಲಗದ್ದೆಗಳಲ್ಲಿ ಬೆಳೆದ ಬೆಳೆಗಳನ್ನು ಕಾಡುಪ್ರಾಣಿಗಳು ನಾಶ ಮಾಡುತ್ತಿರುವುದರಿಂದ ರೈತರಿಗೆ ಆಗುತ್ತಿರುವ ನಷ್ಟಗಳ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದಕ್ಕೆ ಶಾಶ್ವತ ಪರಿಹಾರವನ್ನು ಕಂಡುಹಿಡಿಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;(ವಿವರ ನೀಡುವುದು)

(ಆ) ಹಾಸನ ಜಿಲ್ಲೆಯಲ್ಲಿ ಕಳೆದ 3 ವರ್ಷಗಳಲ್ಲಿ ಕಾಡುಪ್ರಾಣಿಗಳ ಹಾವಳಿಯಿಂದ ಎಷ್ಟು ಎಕರೆ ಬೆಳೆ ಹಾನಿಯಾಗಿದೆ; ಯಾವ ಯಾವ ಬೆಳೆ ಹಾನಿಯಾಗಿದೆ; ಸದರಿ ಹಾನಿಗಳಿಗೆ ಸರ್ಕಾರದಿಂದ ವಿತರಿಸಲಾದ ಪರಿಹಾರವೆಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಹಾಸನ ಜಿಲ್ಲೆಯಲ್ಲಿ ಕಾಡುಪ್ರಾಣಿಗಳ ಹಾವಳಿಯನ್ನು ತಡೆಗಟ್ಟಲು ರೂಪಿಸಿರುವ ಯೋಜನೆಗಳು ಯಾವುವು; ಇದಕ್ಕಾಗಿ ಖರ್ಚು ಮಾಡಿರುವ ಅನುದಾನವೆಷ್ಟು? (ತಾಲ್ಲೂಕುವಾರು ಮಾಹಿತಿ ನೀಡುವುದು)